ಕಳೆದ ಬಾರಿಗಿಂತ ಹೆಚ್ಚು ಅಂತರದಲ್ಲಿ ಗೆಲುವು

ಬೆಂಗಳೂರು: ಈ ಹಿಂದಿನ ಮೂರು ಚುನಾವಣೆಗಳಿಗಿಂತ ಈ ಬಾರಿ ಅತಿಹೆಚ್ಚಿನ ಮತಗಳ ಅಂತರದಲ್ಲಿ ಗೆಲ್ಲುವ ವಿಶ್ವಾಸವಿದೆ. ಜನ ನನ್ನ ಪರವಾಗಿ ನಿಲ್ಲುವ ನಂಬಿಕೆಯಿದೆ ಎಂದು ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಿ.ಕೆ.ಸುರೇಶ್ ಹೇಳಿದರು.

ಮತಗಟ್ಟೆಗೆ ತೆರಳುವ ಮೊದಲು ಸದಾಶಿವನಗರದ ನಿವಾಸದ ಬಳಿ ಮಾತನಾಡಿದ ಅವರು, ಶುಕ್ರವಾರ ಬೆಳಗಿನ ಜಾವದ ತನಕ ಕ್ಷೇತ್ರದ ಕಾರ್ಯಕರ್ತರು, ಮತದಾರರನ್ನು ಭೇಟಿಯಾಗಿ ಬಂದಿದ್ದೇನೆ. ಎಲ್ಲರೂ ಅತ್ಯಂತ ಹುಮ್ಮಸ್ಸಿನಿಂದ ಭಾಗವಹಿಸಿದ್ದಾರೆ. ಪ್ರಜಾಪ್ರಭುತ್ವದಲ್ಲಿ ಮತದಾನ ಹಬ್ಬದಂತೆ. ಹಿರಿಯರು, ಕಿರಿಯರು ಒಟ್ಟಾಗಿ ಭಾಗವಹಿಸಬೇಕು. ಮತದಾನ ಪ್ರಜಾಪ್ರಭುತ್ವದಲ್ಲಿ ಪ್ರಮುಖವಾದ ಪಾತ್ರವಹಿಸುತ್ತದೆ. ಈ ಹಕ್ಕನ್ನು ನಾವು ಚಲಾವಣೆ ಮಾಡಬೇಕಿರುವುದು ನಮ್ಮ ಕರ್ತವ್ಯ ಎಂದು ಹೇಳಿದರು. ಸಂಸತ್ತು ಪ್ರಜಾಪ್ರಭುತ್ವದ ದೇಗುಲ ಎಂದರು.

ದೇಶ, ರಾಜ್ಯವನ್ನು ಅಭಿವೃದ್ಧಿ ಮಾಡಲು, ಅವಶ್ಯಕತೆಗಳನ್ನು ಪೂರೈಸಲು, ಒಳ್ಳೆಯದನ್ನು ಮಾಡಲು, ಕಾನೂನು, ನಿಯಮಗಳನ್ನು ಮಾಡಲಾಗುತ್ತದೆ. ಆದ ಕಾರಣ ಲೋಕಸಭಾ ಚುನಾವಣೆ ಪ್ರಮುಖವಾದುದು ಎಂದು ಹೇಳಿದರು.

ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದ ಸರ್ ಸಿ.ವಿ ರಾಮನ್ ನಗರ ವಿಧಾನಸಭಾ ಕ್ಷೇತ್ರದ ಸೆಂಟರ್ ಫಾರ್ ಎಕ್ಸಲೆನ್ಸ್ ಶಾಲೆಯ ಬೂತ್ ನಂ.173 ರಲ್ಲಿ ಮಾಜಿ ಸಚಿವ ಅರವಿಂದ ಲಿಂಬಾವಳಿ, ಮಹದೇವಪುರ ಕ್ಷೇತ್ರದ ಶಾಸಕಿ ಮಂಜುಳಾ ಅರವಿಂದ ಲಿಂಬಾವಳಿ, ಪುತ್ರ ಮಯೂರ್ ಲಿಂಬಾವಳಿ, ಪುತ್ರಿ ರೇಣುಕಾ ಲಿಂಬಾವಳಿ ಸಮೇತ ಮತದಾನ ಮಾಡಿದರು.

ಈ ಚುನಾವಣೆ ಹೆಚ್ಚು ಮಹತ್ವದ್ದು: ದತ್ತಾತ್ರೇಯ

ಬೆಂಗಳೂರು: ಈ ಬಾರಿಯ ಲೋಕಸಭೆಯ ಚುನಾವಣೆ ಯಾವತ್ತಿಗಿಂತಲೂ ಹೆಚ್ಚು ಮಹತ್ವದ್ದು ಎಂದು ರಾಷ್ಟ್ರೀಯ ಸ್ವಯಂಸೇವಕ ಸಂಘದ (ಆರ್‌ಎಸ್‌ಎಸ್) ಸರಕಾರ್ಯವಾಹ ದತ್ತಾತ್ರೇಯ ಹೊಸಬಾಳೆ ಹೇಳಿದ್ದಾರೆ.

ಶೇಷಾದ್ರಿಪುರದ ಮತಗಟ್ಟೆಯಲ್ಲಿ ಮತದಾನ ಮಾಡಿದ ಬಳಿಕ ಮಾಧ್ಯಮ ಪ್ರತಿನಿಧಿಗಳ ಜತೆ ಮಾತನಾಡಿ, ದೇಶದ ಅಭಿವೃದ್ಧಿ, ಜಗತ್ತಿನಲ್ಲಿ ಭಾರತದ ಗೌರವ, ಈ ದೇಶದ ಕೋಟ್ಯಂತರ ಜನರ ಜೀವನ ಹಸನಾಗಲು, ಅವರ ಜೀವನ ಉತ್ತಮವಾಗಲು, ಸುಖ ಸಮೃದ್ಧಿ ಹೊಂದಲು ಈ ಚುನಾವಣೆಯ ಫಲಿತಾಂಶ ಮಹತ್ತರವಾದ ಭೂಮಿಕೆ ವಹಿಸಲಿದೆ ಎಂದು ಅಭಿಪ್ರಾಯಪಟ್ಟರು. ದೇಶದ ಪ್ರಜಾತಂತ್ರದಲ್ಲಿ ನಮ್ಮ ಸಂವಿಧಾನದ ಪ್ರಕಾರ ಆಗಾಗ್ಗೆ ಎಲ್ಲ ಹಂತದಲ್ಲಿ ಚುನಾವಣೆಗಳು ನಡೆಯುತ್ತವೆ. ಇವತ್ತು ನಾನು ಬಹಳ ಸಂತೋಷದಿಂದ ಪ್ರತಿವರ್ಷದಂತೆ ಇಲ್ಲಿ ಬಂದು ನನ್ನ ಮತ ಚಲಾಯಿಸಿದ್ದೇನೆ. ನಮ್ಮ ಸಮಾಜದ ಜನರು ನೂರಕ್ಕೆ ನೂರರಷ್ಟು ಮತದಾನ ಮಾಡಬೇಕೆಂದು ಸಂಘದ ಕಾರ್ಯಕರ್ತರು ಕೆಲಸ ಮಾಡುತ್ತಿದ್ದಾರೆ. ಪ್ರಜಾತಂತ್ರವನ್ನು ಗೆಲ್ಲಿಸಿ; ಭಾರತವನ್ನು ಉಳಿಸಿ, ಸಮೃದ್ಧಪಡಿಸಿ ಎಂಬ ಉದ್ದೇಶದಿಂದ ಅಭಿಯಾನ ನಡೆಸಲಾಗುತ್ತಿದೆ ಎಂದು ವಿವರಿಸಿದರು.

ಸಮಾಚಾರ ಸಣ್ಣದಲ್ಲ

ಕೊರಿಯರ್ ಗರ್ಲ್ ಆಗಿ ಹೋಗಿ ಪ್ರಚಾರ

ಬೆಂಗಳೂರು: ನಾನು ನನ್ನ ಚಿಕ್ಕಪ್ಪ ಮಾಡಿರುವ ಕೆಲಸಗಳ ಬಗ್ಗೆ ಜನರಿಗೆ ತಿಳಿಸುವ ನಿಟ್ಟಿನಲ್ಲಿ ಕೊರಿಯರ್ ಗರ್ಲ್ ಆಗಿ ಪ್ರಚಾರ ಮಾಡಿದ್ದೇನೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಪುತ್ರಿ ಐಶ್ವರ್ಯಾ ಹೇಳಿದರು.

ಮತದಾನದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿ, ಚಿಕ್ಕಪ್ಪನ ಪರವಾಗಿ ಅಪಾರ್ಟ್‌ಮೆಂಟ್‌ಗಳಲ್ಲಿ ಮತಪ್ರಚಾರದ ಕುರಿತು ಪ್ರತಿಕ್ರಿಯಿಸಿದ ಅವರು, ಕೆಲವೊಂದುಬಾರಿ ನಮ್ಮ ಬ್ಯುಸಿ ಶೆಡ್ಯೂಲ್‌ನಲ್ಲಿ ಯಾರು ಎಷ್ಟು ಕೆಲಸ ಮಾಡಿದ್ದಾರೆ ಎಂಬುದನ್ನು ನಾವು ಮರೆತಿರುತ್ತೇವೆ. ಹೀಗಾಗ ಕೊರಿಯರ್ ಗರ್ಲ್ ಆಗಿ ಅವರು ಮಾಡಿರುವ ಕೆಲಸವನ್ನು ಜನಕ್ಕೆ ಹೇಳುವಂತಹ ಕೆಲಸ ಮಾಡಿದ್ದೇನೆ ಎಂದು ತಿಳಿಸಿದರು. ನನಗೂ ಹೆಮ್ಮೆ ಇದೆ. ನಮ್ಮ ಸಂಸದನ ಮೇಲೆ ಹಾಗೂ ಅವರು ಮಾಡಿರುವ ಕೆಲಸದ ಮೇಲೆ ಮಗಳಿಗಿಂತ ಹೆಚ್ಚಾಗಿ ಒಬ್ಬಳು ವಿದ್ಯಾವಂತೆ ಆಗಿ, ನನಗೆ ಗೊತ್ತಿರುವುದನ್ನು ಜನಕ್ಕೆ ಹೇಳುವುದು ನನ್ನ ಕರ್ತವ್ಯ ಅಂದುಕೊಂಡು ಹೋಗಿ ಪ್ರಚಾರ ಮಾಡಿದ್ದೇನೆ. ಈ ಪ್ರಚಾರಕ್ಕೆ ತಕ್ಕ ಪ್ರತಿಫಲ ಸಿಗುತ್ತೆ ಅನ್ನುವ ವಿಶ್ವಾಸವಿದೆ. ಅಲ್ಲದೇ ಚಿಕ್ಕಪ್ಪ ಗೆದ್ದೇ ಗೆಲ್ಲುತ್ತಾರೆ ಎಂಬ ಆತ್ಮವಿಶ್ವಾಸ ಕುಟುಂಬಕ್ಕಿದೆ ಎಂದರು.

ಚುನಾವಣೆ ಕರ್ತವ್ಯ ನಿರತ ಶಿಕ್ಷಕಿ ಸಾವು

ಬೆಂಗಳೂರು ಗ್ರಾಮಾಂತರ: ಜಿಲ್ಲೆಯ ದೊಡ್ಡಬಳ್ಳಾಪುರ ಹೊರವಲಯದ ರೋಜಿಪುರ ಮತಗಟ್ಟೆ 155 ರಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಚುನಾವಣಾ ಕರ್ತವ್ಯಕ್ಕೆ ಹಾಜರಾಗಿದ್ದ ಶಿಕ್ಷಕಿಯೊಬ್ಬರು ಸಾವನ್ನಪ್ಪಿದ್ದಾರೆ. ನೆಲಮಂಗಲ ತಾಲೂಕಿನ ಮಾರಗೊಂಡನಹಳ್ಳಿ ನಿವಾಸಿ ಕವಿತಾ (35) ಮೃತ ಶಿಕ್ಷಕಿ.

ಕರ್ತವ್ಯದಲ್ಲಿರುವಾಗ ಸಂಜೆ ಶಾಲೆಯಲ್ಲಿ ಅಸ್ವಸ್ಥಗೊಂಡು ಕುಸಿದು ಬಿದ್ದಿದ್ದರು. ಕೂಡಲೇ ಸಿಬ್ಬಂದಿಗಳು ಅವರನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಿದ್ದರು. ಆದರೆ, ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೆ ಕೊನೆಯುಸಿರೆಳೆದಿದ್ದಾರೆ.

ಮತಚಲಾವಣೆ ಮಾಡಿದ ಸಚಿವ ಕೆ.ಎಚ್. ಮುನಿಯಪ್ಪ ಕಾರಿನಲ್ಲಿ ಕುಳಿತು ಕಿರು ನಗೆ ಬೀರಿದರು.

ಬೆಂಗಳೂರು ಉತ್ತರದಲ್ಲಿ ಅತಿ ಹೆಚ್ಚು ಶೇ. 54.42ರಷ್ಟು ಮತದಾನ | ಶೇ. 52.91ರ ಕಳಪೆ ಮತದಾನ ಆಗಿರುವ ಬೆಂಗಳೂರು ಕೇಂದ್ರ

ರಾಜಧಾನಿಯಲ್ಲಿ ಮತ್ತೆ ಕಳಪೆ ಮತದಾನ

ಬೆಂಗಳೂರು: ಯಾರು ಎಷ್ಟೇ ಪ್ರಯತ್ನಪಟ್ಟರೂ ತಾವು ಮಾತ್ರ ಮತದಾನದಿಂದ ದೂರ ಉಳಿಯುತ್ತೇವೆ ಎಂಬುದನ್ನು ರಾಜಧಾನಿಯ ನಾಗರಿಕರು ಮತ್ತೊಮ್ಮೆ ಸಾಬೀತುಪಡಿಸಿದ್ದಾರೆ.

ಲೋಕಸಭೆಗೆ ಬೆಂಗಳೂರಿನ ಮೂರು ಕ್ಷೇತ್ರಗಳಿಗೆ ಶುಕ್ರವಾರ ನಡೆದ ಚುನಾವಣೆಯಲ್ಲಿ ಶೇ. 55ಕ್ಕಿಂತ ಕಡಿಮೆ ಮತದಾನವಾಗಿದೆ. ಮತದಾನ ಜಾಗೃತಿಗೆ ಚುನಾವಣಾ ಆಯೋಗ, ಮತದಾರರು ಮತಗಟ್ಟೆಗೆ ಬರುವಂತೆ ಹೋಟೆಲ್, ಕೆಫೆ ಮಾಲೀಕರು ಮಾಡಿದ ಪ್ರಯತ್ನಗಳಿಗೆ ನಗರದ ಮತದಾರ ಒಲಿಯಲಿಲ್ಲ.

ಈವರೆಗಿನ ಮಾಹಿತಿ ಪ್ರಕಾರ ಬೆಂಗಳೂರು ಕೇಂದ್ರದಲ್ಲಿ ಅತಿ ಕಡಿಮೆ ಅಂದರೆ ಶೇ. 52.91ರಷ್ಟು ಮತದಾನವಾಗಿದ್ದರೆ, ಬೆಂಗಳೂರು ದಕ್ಷಿಣದಲ್ಲಿ ಶೇ. 53.15 ಹಾಗೂ ಬೆಂಗಳೂರು ಉತ್ತರದಲ್ಲಿ ಅತಿ ಹೆಚ್ಚು ಅಂದರೆ ಶೇ. 54.42ರಷ್ಟು ಮಂದಿ ತಮ್ಮ ಹಕ್ಕು ಚಲಾಯಿಸಿದ್ದಾರೆ. 2019ರ ಲೋಕಸಭೆ ಚುನಾವಣೆಯಲ್ಲಿ ಬೆಂಗಳೂರು ದಕ್ಷಿಣದಲ್ಲಿ ಶೇ. 53.7, ಬೆಂಗಳೂರು ಕೇಂದ್ರದಲ್ಲಿ ಶೇ. 54.3 ಮತ್ತು ಬೆಂಗಳೂರು ಉತ್ತರದಲ್ಲಿ ಶೇ. 54.7ರಷ್ಟು ಮತದಾನವಾಗಿತ್ತು. 2023ರ ವಿಧಾನಸಭೆ ಚುನಾವಣೆಯಲ್ಲಿ ಬಿಬಿಎಂಪಿ ವ್ಯಾಪ್ತಿಯಲ್ಲಿ ನಡೆದ ಮತದಾನ ಶೇ. 54.53ರಷ್ಟು ಮಂದಿ ಮಾತ್ರ ಹಕ್ಕು ಚಲಾಯಿಸಿದ್ದರು.

ಬೆಳಗ್ಗೆ ಮತದಾನ ಆರಂಭವಾದ ರಭಸ ಗಮನಿಸಿದಾಗ ಈ ಬಾರಿ ಮತದಾನ ಪ್ರಮಾಣ ಶೇ. 60 ಮೀರಬಹುದು ಎಂಬಂತೆ ಕಾಣಿಸುತ್ತಿತ್ತು. ಆದರೆ, ಮಧ್ಯಾಹ್ನವಾಗುತ್ತಿದ್ದಂತೆ ಮತಗಟ್ಟೆಗಳು ಖಾಲಿ ಹೊಡೆಯಲಾರಂಭಿಸಿದವು. ಬಿಸಿಲು ಇಳಿದ ಮೇಲೆ ಸಂಜೆ ಮತ್ತೆ ಮತದಾನವಾಗಬಹುದು ಎಂಬ ಊಹೆಯೂ ಸುಳ್ಳಾಗಿ ಮತ್ತೊಮ್ಮೆ ಬೆಂಗಳೂರಿನ ಜನ ತಾವು ಮತಗಟ್ಟೆಗೆ ಬರುವುದಿಲ್ಲ ಎಂಬುದನ್ನು ಸಾಬೀತುಪಡಿಸಿದರು.

ಗಣ್ಯರು ಮತ ಹಾಕಿದರೂ ಸುಶಿಕ್ಷಿತರು ಬರಲಿಲ್ಲ

ಸಿನಿಮಾ ತಾರೆಯರು, ರಾಜ್ಯದ ಪ್ರಮುಖ ರಾಜಕಾರಣಿಗಳು, ಕ್ರೀಡಾಪಟುಗಳು ಮತ್ತು ಉದ್ಯಮಿಗಳೂ ಹೀಗೆ ವಿವಿಧ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವವರು ಶುಕ್ರವಾರ ತಮ್ಮ ಹಕ್ಕು ಚಲಾಯಿಸಿದ್ದಾರೆ. ಕೊಳಗೇರಿಗಳು, ಮಧ್ಯಮ ವರ್ಗದವರು ಹೆಚ್ಚಾಗಿರುವ ಪ್ರದೇಶಗಳಲ್ಲಿ ಮತದಾನ ಪ್ರಮಾಣ ಹೆಚ್ಚಾಗಿತ್ತು. ಆದರೆ, ಸುಶಿಕ್ಷಿತರು ಎನಿಸಿಕೊಂಡಿದ್ದವರು ಇರುವ ಮತಗಟ್ಟೆಗಳಲ್ಲೇ ಅತಿ ಕಡಿಮೆ ಮತದಾನವಾಗಿದೆ. ಮತದಾನ ವೇಳೆ ಯಾವುದೇ ರೀತಿಯ ಅಹಿತಕರ ಘಟನೆ ನಡೆಯದಂತೆ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯ ಕ್ಷೇತ್ರಗಳಲ್ಲಿ ಸುಮಾರು 13 ಸಾವಿರಕ್ಕೂ ಹೆಚ್ಚು ಸಿಬ್ಬಂದಿಗಳಿಂದ ಬಂದೋಬಸ್ತ್ ಕೈಗೊಳ್ಳಲಾಗಿತ್ತು.

ಕೆಲವು ಮತಗಟ್ಟೆಗಳಲ್ಲಿ ಸಣ್ಣಪುಟ್ಟ ಸಮಸ್ಯೆ, ಗಲಾಟೆಗಳು ನಡೆದಿರುವುದು ಕಂಡು ಬಂದಿತ್ತು. ಜಯನಗರದಲ್ಲಿ ಕೆಲ ಮತಗಟ್ಟೆಗಳಲ್ಲಿ ಮತದಾರರ ಹೆಸರು ಮಾಯವಾಗಿತ್ತು. ಇದರಿಂದ ಮತದಾರರು ಚುನಾವಣಾಧಿಕಾರಿಗಳ ವಿರುದ್ಧ ಅಸಮಧಾನ ಹೊರಹಾಕಿದರು. ಬೆಳಗ್ಗೆ 7 ಗಂಟೆಯಿಂದಲೇ ಬಿರುಸಿನ ಮತದಾನ ನಡೆಯಿತು. ಮಧ್ಯಾಹ್ನದ ವೇಳೆ ಮತದಾನ ಪ್ರಕ್ರಿಯೇ ನಿಧಾನಗತಿಯಲ್ಲಿತ್ತು. ಸಂಜೆ 4 ಗಂಟೆಯಿಂದ ಮತಗಟ್ಟೆಗಳ ಮುಂದೆ ಜನರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಮತದಾನ ಮಾಡುವುದು ಕಂಡುಬಂದಿತ್ತು.

ವಿದೇಶದಿಂದ ಆಗಮನ: ಬೆಂಗಳೂರಿನ ಜನ ಮತದಾನಕ್ಕೆ ಆಸಕ್ತಿ ತೋರಿಸದಿದ್ದರೂ ದೇಶ-ವಿದೇಶಗಳಿಂದ ಕೆಲವರು ಆಗಮಿಸಿ ಮತದಾನ ಮಾಡಿದರು. ವಿದ್ಯಾರಣ್ಯಪುರ ತಿಂಡ್ಲುವಿನ ನಿವಾಸಿ ಸುಧೀಂದ್ರ, ವಿಜಯಮಾಲಾ ದಂಪತಿ ಆಸ್ಟ್ರೇಲಿಯಾದಿಂದ ಆಗಮಿಸಿ ತಮ್ಮ ಹಕ್ಕು ಚಲಾಯಿಸಿದರು. ಮತಗಟ್ಟೆಗಟ್ಟೆಗಳಲ್ಲಿ ಮೊಬೈಲ್ ಬಳಕೆ ನಿಷೇಧ ಹೇರಲಾಗಿತ್ತು. ಇದರಿಂದ ಭದ್ರತಾ ಸಿಬ್ಬಂದಿಗಳು ಮತಗಟ್ಟೆಗೆ ಆಗಮಿಸುವ ಜನರ ಮೊಬೈಲ್‌ಗಳನ್ನು ಹೊರಗಡೆ ಇಡುವ ವ್ಯವಸ್ಥೆ ಮಾಡಿದ್ದರು.

ಹಣ ಹಂಚಿದ ಆರೋಪ: ಚಾಮರಾಜಪೇಟೆ ಮತದಾನ ಕೇಂದ್ರದ ಬಳಿ ಕಾಂಗ್ರೆಸ್ ಕಾರ್ಯಕರ್ತರಿಂದ ಸಾರ್ವಜನಿಕರಿಗೆ ಹಣ ಹಂಚಲಾಗುತ್ತಿರುವ ವಿಡಿಯೊವೊಂದು ಸಾಮಾಜಿಕ ಜಾಲತಾಣದಲ್ಲಿ ಹರಿದಾಡಿದೆ. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಬಿಜೆಪಿ ಕಾರ್ಯಕರ್ತರು ಚುನಾವಣಾಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ. ತಾವು ಸೂಚಿಸಿದ ಅಭ್ಯರ್ಥಿಗೆ ಮತದಾನ ಮಾಡಿ ಬಂದವರಿಗೆ 500 ರು. ವಿತರಣೆ ಮಾಡುತ್ತಿರುವ ಹಿನ್ನೆಲೆಯಲ್ಲಿ ಗಲಾಟೆ ನಡೆಯಿತು. ಐದನೂರು ರೂಪಾಯಿ ಪಡೆಯಲು ಮತದಾರರು ಪರದಾಡಿದರು.

ಆಕ್ಸಿಜನ್ ಸಹಾಯದಿಂದ ಆಗಮಿಸಿ ಹಕ್ಕು ಚಲಾವಣೆ

ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಜಯನಗರದ ವೃದ್ಧೆಯೊಬ್ಬರು ಆಕ್ಸಿಜನ್ ಸಹಾಯದಿಂದಲೇ ಮತಗಟ್ಟೆಗೆ ಬಂದು ಹಕ್ಕು ಚಲಾವಣೆ ಮಾಡಿದ್ದಾರೆ. 78 ವರ್ಷದ ಕಲಾವತಿ ಎಂಬುವವರೇ ಆಕ್ಸಿಜನ್ ಸಮೇತ ಹಕ್ಕು ಚಲಾಯಿಸಿದ್ದಾರೆ. ಕಲಾವತಿ ಉಸಿರಾಟದ ಸಮಸ್ಯೆಯಿಂದ ಬಳಲುತ್ತಿದ್ದರು. ಇವರನ್ನು ಏಪ್ರಿಲ್ 23ರಂದು ಜಯನಗರದ ಮಣಿಪಾಲ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಶುಕ್ರವಾರ ಅವರನ್ನು ಆಂಬ್ಯುಲೆನ್ಸ್ ಮೂಲಕ ವೈದ್ಯಕೀಯ ಸಿಬ್ಬಂದಿ ಜತೆ ಕರೆತರಲಾಗಿದ್ದು, ಮತ ಚಲಾವಣೆಗೆ ಅವಕಾಶ ಕಲ್ಪಿಸಲಾಗಿತ್ತು. ಕೊನೆಗೂ ಅವರು ತಮ್ಮ ಹಕ್ಕು ಚಲಾವಣೆ ಮಾಡಿದ್ದಾರೆ.

ನಿಯಮ ಉಲ್ಲಂಘಿಸಿ ಮೊಬೈಲ್ ರೆಕಾರ್ಡ್, ಸೆಲ್ಫಿ

ಚುನಾವಣಾ ಆಯೋಗದ ಸೂಚನೆ ಉಲ್ಲಂಘಿಸಿ ಕೆಲವು ಕಡೆ ಅಭ್ಯರ್ಥಿಗಳು ಮತ್ತು ಮತದಾರರು ಮತದಾನದ ನಂತರ ಮೊಬೈಲ್ ರೆಕಾರ್ಡ್ ಹಾಗೂ ಸೆಲ್ಫಿ ಕ್ಲಿಕಿಸಿಕೊಂಡಿರುವ ಘಟನೆಗಳು ನಡೆದಿವೆ. ಮತದಾನದ ವೇಳೆ ಅದರಲ್ಲೂ ಇವಿಎಂ ಬಳಿ ಯಾರೊಬ್ಬರೂ ಸೆಲ್ಫಿ ತೆಗೆದುಕೊಳ್ಳುವುದು ಇಲ್ಲವೇ ಮತದಾನದ ವಿಡಿಯೋ ಚಿತ್ರೀಕರಣ ಮಾಡಿಕೊಳ್ಳಬಾರದೆಂದು ಆಯೋಗ ಕಟ್ಟುನಿಟ್ಟಿನ ಸೂಚನೆ ನೀಡಿತ್ತು. ಆಯೋಗದ ಸೂಚನೆಯನ್ನು ಧಿಕ್ಕರಿಸಿ ಕೆಲವು ಕಡೆ ಮೊಬೈಲ್‌ನಲ್ಲಿ ವಿಡಿಯೋ ರೆಕಾರ್ಡ್ ಮಾಡಿಕೊಂಡಿದ್ದರೆ, ಇನ್ನು ಕೆಲವು ಕಡೆ ಸೆಲ್ಫಿಯನ್ನು ತೆಗೆದುಕೊಂಡಿದ್ದಾರೆ. ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸೌಮ್ಯಾರೆಡ್ಡಿ ಅವರಿಗೆ ಮತ ಹಾಕಿ ಅದನ್ನು ವಿಡಿಯೋ ಮಾಡಿಕೊಂಡಿದ್ದಾರೆ. ಜತೆಗೆ, ಬ್ಯಾಲೆಟ್ ಪೇಪರ್ ಮುದ್ರಣ ಆಗುವುದನ್ನೂ ವಿಡಿಯೋ ಮಾಡಿಕೊಂಡು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ.

ಮತಗಟ್ಟೆಯಲ್ಲಿ ತಾಂತ್ರಿಕ ದೋಷ: ದಾಸರಹಳ್ಳಿ ಕಾವೇರಿ ನಗರದ ಎಂಇಎಸ್ ಖಾಸಗಿ ಶಾಲೆ ಮತಗಟ್ಟೆ ಸಂಖ್ಯೆ 229 ನಲ್ಲಿ ತಾಂತ್ರಿಕ ದೋಷ ಕಂಡುಬಂದ ಹಿನ್ನೆಲೆಯಲ್ಲಿ ಒಂದು ಕಡೆ ತಡವಾಗಿ ಮತದಾನ ನಡೆಯಿತು. ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರದಲ್ಲಿ ಈ ಘಟನೆ ನಡೆದಿದೆ. ಮತದಾನಕ್ಕೆ ಆಗಮಿಸಿದ್ದ ಸಾರ್ವಜನಿಕರು ಸರತಿ ಸಾಲಿನಲ್ಲಿ ನಿಂತಿದ್ದರು. ಪ್ರಾರಂಭದಲ್ಲಿ ಮತದಾನ ನಡೆಯಿತು. ಕೆಲಸ ಸಮಯದ ಬಳಿಕ ಇವಿಎಂ ಯಂತ್ರದಲ್ಲಿ ತಾಂತ್ರಿಕ ದೋಷ ಕಂಡು ಬಂದಿದೆ. ಇದರಿಂದ ಮತಗಟ್ಟೆ ಸಿಬ್ಬಂದಿಗಳು ಮತದಾನ ಸ್ಥಗಿತಗೊಳಿಸಿದರು. ಸಮಸ್ಯೆ ಸರಿಪಡಿಸಿದ ಬಳಿಕ ಮತದಾನಕ್ಕೆ ಅವಕಾಶ ಮಾಡಿಕೊಡಲಾಯಿತು.

ಮತದಾರರಿಲ್ಲದೆ ಖಾಲಿ ಹೊಡೆಯುತ್ತಿರುವ ಮತಗಟ್ಟೆಗಳು.

ಹಕ್ಕು ಚಲಾಯಿಸಲು ಕಾಯುತ್ತಿರುವ ಬೆರಳೆಣಿಕೆಯ ಮತದಾರರು.

ಆಂಬ್ಯುಲೆನ್ಸ್‌ನಲ್ಲಿ ತೆರಳಿ ಮತದಾನ

ರಾಜಾಜಿನಗರ ಎರಡನೇ ಬ್ಲಾಕ್ ನಿವಾಸಿ 83ರ ಹರೆಯದ ಗೀತಾ ಬಿ. ಎಂಬುವರು ಆಕ್ಸಿಜನ್ ಸಿಲಿಂಡರ್ ವ್ಯವಸ್ಥೆಯ ಆಂಬ್ಯುಲೆನ್ಸ್‌ನಲ್ಲಿ ಮತಗಟ್ಟೆಗೆ ಬಂದು ಮತದಾನ ಮಾಡಿದ್ದಾರೆ. ಈ ಕುರಿತು ಮಾಹಿತಿ ಹಂಚಿಕೊಂಡಿರುವ ಮಾಜಿ ಸಚಿವ ಎಸ್.ಸುರೇಶ್‌ಕುಮಾರ್, ಗೀತಾ ಬಿ. ಅವರು ಎಂಬುವರು ಕೋವಿಡ್‌ನಲ್ಲಿ ಸಂಕಷ್ಟಕ್ಕೆ ಸಿಲುಕಿ ಕಳೆದ ಮೂರು ವರುಷಗಳಿಂದ ಆಕ್ಸಿಜನ್ ಕಾನ್ಸಂಟ್ರೇಟರ್ ಬಳಸುತ್ತಿದ್ದಾರೆ. ಇದೇ ವೇಳೆಗೆ ಅವರು ಹರಿದಾಸ ಸಾಹಿತ್ಯ ಕುರಿತು ಪಿಎಚ್.ಡಿ ಮಾಡುತ್ತಿದ್ದಾರೆ. ಕಳೆದ ತಿಂಗಳು ಉತ್ತರಾದಿ ಮಠದವರು ನಡೆಸಿದ ಹರಿದಾಸ ಸಾಹಿತ್ಯ ಪರೀಕ್ಷೆಯಲ್ಲಿ ಚಿನ್ನದ ಪದಕ ಗಳಿಸಿದ್ದಾರೆ. ಹರಿದಾಸ ಸಾಹಿತ್ಯ ಕುರಿತು ಪಾಠ ಮಾಡುತ್ತಾರೆ. ಮೊನ್ನೆ ಚುನಾವಣಾ ಪ್ರಚಾರಕ್ಕೆ ಹೋದಾಗ ನಾನು ಓಟು ಹಾಕಬೇಕು . ಆಕ್ಸಿಜನ್ ಸಿಲಿಂಡರ್ ಇರುವ ಆಂಬ್ಯುಲೆನ್ಸ್ ವ್ಯವಸ್ಥೆ ಮಾಡು ಎಂದು ಕಟ್ಟಪ್ಪಣೆ ಮಾಡಿದ್ದರು. ಅದರಂತೆ ಆಂಬ್ಯುಲೆನ್ಸ್‌ನಲ್ಲಿ ತೆರಳಿ ಮತ ಹಾಕಿದ್ದಾರೆ ಎಂದು ಹೇಳಿದ್ದಾರೆ.

ಆಸ್ಪತ್ರೆಯಿಂದ ಬಂದು ಮತ ಹಾಕಿದ ನಾರಾಯಣಮೂರ್ತಿ

ರಾಜಧಾನಿ ಬೆಂಗಳೂರಿನಲ್ಲಿ ಇನ್ಫೋಸಿಸ್ ಸಹ ಸಂಸ್ಥಾಪಕರಾದ 77ರ ಹರೆಯದ ನಾರಾಯಣ ಮೂರ್ತಿ ಆಸ್ಪತ್ರೆಯಿಂದ ಬಿಡುಗಡೆಯಾಗಿ ನೇರವಾಗಿ ಮತಗಟ್ಟೆಗೆ ಬಂದು ತಮ್ಮ ಹಕ್ಕು ಚಲಾಯಿಸಿದ್ದಾರೆ. ಈ ಬಗ್ಗೆ ಪ್ರತಿಕ್ರಿಯಿಸಿ ಸುಧಾ ಮೂರ್ತಿ, ನಾರಾಯಣ ಮೂರ್ತಿಯವರು ಅನಾರೋಗ್ಯದ ಹಿನ್ನೆಲೆ ಆಸ್ಪತ್ರೆಗೆ ದಾಖಲಾಗಿದ್ದರು. ಈಗ ನಾವು ಅವರನ್ನು ಆಸ್ಪತ್ರೆಯಿಂದ ಡಿಸ್ಚಾರ್ಜ್ ಮಾಡಿ ನೇರವಾಗಿ ಮತಗಟ್ಟೆಗೆ ಕರೆದುಕೊಂಡು ಬಂದಿದ್ದೇವೆ. ಮತದಾನದ ಬಳಿಕ ಅವರನ್ನು ನಾವು ಮನೆಗೆ ಕರೆದುಕೊಂಡು ಹೋಗುತ್ತೇವೆ ಎಂದು ಹೇಳಿದ್ದಾರೆ.

ಮತದಾನ ಕೇಂದ್ರದಲ್ಲಿ ಹೃದಯ ಸ್ತಂಭನ

ಜೆ.ಪಿ.ನಗರ 8ನೇ ಹಂತದ ಜಂಬೂ ಸವಾರಿ ದಿನ್ನೆಯಲ್ಲಿ ಮತ ಚಲಾಯಿಸಲು ಬಂದ ಮಹಿಳೆಯೊಬ್ಬರಿಗೆ ಹೃದಯ ಸ್ತಂಭನ ಆಗಿದೆ. ಬಳಿಕ ಅಲ್ಲಿಯೇ ಮತ ಚಲಾಯಿಸಲು ಬಂದಿದ್ದ ವೈದ್ಯರೊಬ್ಬರಿಂದ ಜೀವ ಉಳಿದಿದೆ. ಮತದಾನ ಮಾಡಲು ಬಂದಿದ್ದ ಮಹಿಳೆ ಆಯಾಸವಾಗಿದೆ ಎಂದು ಮತಗಟ್ಟೆಯಲ್ಲಿ ಇಟ್ಟಿದ್ದ ನೀರು ಕುಡಿಯಲು ಹೋದಾಗ ಅಲ್ಲೇ ಕುಸಿದು ಬಿದ್ದಿದ್ದಾರೆ. ಅದೇ ಸಮಯದಲ್ಲಿ ಅಲ್ಲಿಗೆ ಬಂದಿದ್ದ ಬೊಮ್ಮಸಂದ್ರದ ನಾರಾಯಣ ಆರೋಗ್ಯ ಕೇಂದ್ರದ ಮೂತ್ರಪಿಂಡ ತಜ್ಞ ಡಾ. ಗಣೇಶ್ ಶ್ರೀನಿವಾಸ ಪ್ರಸಾದ್ ಅವರು ರಕ್ಷಣೆಗೆ ದಾವಿಸಿದ್ದಾರೆ. ನಾಡಿಮಿಡಿತ ಪರಿಶೀಲಿಸಿದ ವೈದ್ಯರು, ಪಲ್ಸ್ ರೇಟ್ ಕಡಿಮೆಯಾಗುತ್ತಿರುವುದನ್ನು ಗಮನಿಸಿದ್ದಾರೆ. ಆ ಸಮಯದಲ್ಲಿ ದೇಹ ಕೂಡ ಯಾವುದೇ ಸ್ಪಂದನೆಯನ್ನು ಮಾಡುತ್ತಿರಲಿಲ್ಲ. ಹೀಗಾಗಿ ಕೂಡಲೇ ಸಿಪಿಆರ್ ಮಾಡಿದ್ದು, ಪರಿಸ್ಥಿತಿಯು ಕೊಂಚ ಮಟ್ಟಿಗೆ ಸುಧಾರಿಸುವಂತೆ ಮಾಡಿದ್ದಾರೆ. ಚುನಾವಣಾ ಕರ್ತವ್ಯದಲ್ಲಿದ್ದವರು ಧಾವಿಸಿ ಜ್ಯೂಸ್ ನೀಡಿದ್ದಾರೆ. ಕೂಡಲೇ ಆಂಬ್ಯುಲೆನ್ಸ್‌ಗೆ ಕರೆ ಮಾಡಿ ಮಹಿಳೆಯನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಮಹಿಳೆ ಚೇತರಿಸಿಕೊಳ್ಳುತ್ತಿದ್ದಾರೆ.

ಎಲ್ಲ ಕ್ಷೇತ್ರದಲ್ಲಿ ಮತದಾನ ಪ್ರಮಾಣದಲ್ಲಿ ಏರಿಕೆ | ಬೆಂಗಳೂರಿನಲ್ಲಿ ಸರಾಸರಿ 55ಕ್ಕಿಂತ ಕಡಿಮೆ | ರಾಜ್ಯದ ಸರಾಸರಿಗೆ ಹೋಲಿಸಿದರೆ, ಶೇ.15ರಷ್ಟು ಕಡಿಮೆ

ಮತದಾನದಲ್ಲಿ ಏರಿಕೆಯಾದರೂ ಮತ ಹಾಕದ ಅರ್ಧದಷ್ಟು ಮಂದಿ

ಬೆಂಗಳೂರು: ಯಾವುದೇ ಚುನಾವಣೆ ನಡೆದರೂ ರಾಜಧಾನಿ ಬೆಂಗಳೂರು ಮಂದಿಯನ್ನು ಮತಗಟ್ಟೆಯತ್ತ ಸೆಳೆಯುವುದೇ ಚುನಾವಣಾ ಆಯೋಗ ಹಾಗೂ ರಾಜಕೀಯ ಪಕ್ಷಗಳಿಗೆ ಬಹುದೊಡ್ಡ ಸವಾಲಾಗಿರುತ್ತದೆ. ಕಳೆದ ಲೋಕಸಭಾ ಚುನಾವಣೆಗೆ ಹೋಲಿಸಿದರೆ, ಈ ಬಾರಿ ಹೆಚ್ಚುವರಿ ಮತದಾನವಾಗಿದ್ದರೂ, ರಾಜಧಾನಿಯ ಅರ್ಧದಷ್ಟು ಮಂದಿ ಮತಗಟ್ಟೆಯತ್ತ ಸುಳಿದಿಲ್ಲ.

ಬೆಂಗಳೂರಿನಲ್ಲಿ ಶೇ.65ಕ್ಕಿಂತ ಹೆಚ್ಚು ಮತದಾನ ಮಾಡಬೇಕು ಎನ್ನುವ ಉದ್ದೇಶದಿಂದ ಚುನಾವಣಾ ಆಯೋಗ ಹಲವು ಜಾಗೃತಿ ಜಾಥವನ್ನು ಹಮ್ಮಿಕೊಂಡಿತ್ತು. ಇದರೊಂದಿಗೆ ಬೆಂಗಳೂರು ಹೊರಭಾಗದಲ್ಲಿರುವ ರೆಸಾರ್ಟ್‌ಗಳನ್ನು ಬಂದ್ ಮಾಡಿಸಲಾಗಿತ್ತು. ಈ ಎಲ್ಲದ ಫಲವಾಗಿ ರಾಜಧಾನಿಯಲ್ಲಿ ಕಳೆದ ಬಾರಿಗೆ ಹೋಲಿಸಿದರೆ ಈ ಬಾರಿ ಶೇ.2ರಷ್ಟು ಮತದಾನದ ಪ್ರಮಾಣ ಹೆಚ್ಚಾಗಿದೆ.

ಕ್ಷೇತ್ರ	2014	2019	2023
ಬೆಂಗಳೂರು ಉತ್ತರ	56.53	50.03	54.42
ಬೆಂಗಳೂರು ದಕ್ಷಿಣ	55.75	53.53	53.15
ಬೆಂಗಳೂರು ಕೇಂದ್ರ	55.64	49.76	52.81
ಬೆಂಗಳೂರು ಗ್ರಾಮಾಂತರ	66.45	64.09	67.29

ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಬೆಂಗಳೂರು ಕೇಂದ್ರ, ದಕ್ಷಿಣ ಹಾಗೂ ಉತ್ತರ ಲೋಕಸಭಾ ಕ್ಷೇತ್ರಗಳು ಬಂದರೆ, ಬೆಂಗಳೂರು ಗ್ರಾಮಾಂತರ ವ್ಯಾಪ್ತಿಯ ರಾಜರಾಜೇಶ್ವರಿ ನಗರ, ಆನೇಕಲ್ ಹಾಗೂ ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರಗಳು ಸೇರಿವೆ. ಕಳೆದ ಬಾರಿಗೆ ಹೋಲಿಸಿದರೆ, ಬೆಂಗಳೂರು ದಕ್ಷಿಣ ಕ್ಷೇತ್ರದಲ್ಲಿ ಶೇ.0.40ರಷ್ಟು ಮತಗಳಿಕೆ ಕಡಿಮೆಯಾಗಿದೆ.

ಬೆಂಗಳೂರು ದಕ್ಷಿಣ ಹೊರತುಪಡಿಸಿದರೆ ಬೆಂಗಳೂರು ಕೇಂದ್ರ, ಉತ್ತರ ಹಾಗೂ ಗ್ರಾಮಾಂತರದಲ್ಲಿ ಶೇ.3ರಿಂದ4ರಷ್ಟು ಮತದಾನ ಹೆಚ್ಚಾಗಿದೆ. ಈ ಮೂರು ಕ್ಷೇತ್ರದಲ್ಲಿ ಶೇ.3ರಷ್ಟು ಮತದಾನ ಹೆಚ್ಚಾಗಿರುವುದರಿಂದ ಫಲಿತಾಂಶದಲ್ಲಿ ಏರಿಳಿತವಾಗುವ ಸಾಧ್ಯತೆ ಹೆಚ್ಚಿದೆ ಎನ್ನುವ ಮಾತುಗಳು ಕೇಳಿಬಂದಿದೆ.

ಗ್ರಾಮಾಂತರದಲ್ಲಿಯೇ ಅತಿಹೆಚ್ಚು

ಇನ್ನು ಬೆಂಗಳೂರಿನ ಮೂರು ಲೋಕಸಭೆಗಳೊಂದಿಗೆ ಬೆಂಗಳೂರು ಗ್ರಾಮಾಂತರದಲ್ಲಿ ರಾಜರಾಜೇಶ್ವರಿ ನಗರ, ಆನೇಕಲ್, ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರಗಳು ಬರುತ್ತದೆ. ಬೆಂಗಳೂರಿನ ಈ ಕ್ಷೇತ್ರಗಳನ್ನು ಹೊರತುಪಡಿಸಿದರೆ, ಇನ್ನುಳಿದ ಎಲ್ಲ ಕ್ಷೇತ್ರದಲ್ಲಿಯೂ ಸರಾಸರಿ ಶೇ.82ರಷ್ಟು ಮತದಾನವಾಗಿದೆ. ಆದರೆ ಬೆಂಗಳೂರಿಗೆ ಹೊಂದಿಕೊಂಡಿರುವ ಈ ಮೂರು ಕ್ಷೇತ್ರದಲ್ಲಿನ ಮತಪ್ರಮಾಣ ಇಳಿಕೆ ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸರಾಸರಿಯನ್ನು ಶೇ.65.72ಕ್ಕೆ ಇಳಿಸಿದೆ. ಈ ಮೂಲಕ ಗ್ರಾಮೀಣ ಭಾಗದ ಮತದಾರರಿಗೆ ಹೋಲಿಸಿದರೆ, ರಾಜಧಾನಿಯಲ್ಲಿರುವ ಮಂದಿಗೆ ಮತದಾನದ ಬಗ್ಗೆ ಹೆಚ್ಚು ಆಸಕ್ತಿಯಿಲ್ಲ ಎನ್ನುವುದು ಸ್ಪಷ್ಟ.

ಶಾಲಾ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆಗೆ ತಡೆ ನೀಡಿದ ಕೆಎಟಿ

ಬೆಂಗಳೂರು: ಪ್ರಾಥಮಿಕ, ಪ್ರೌಢಶಾಲಾ ಶಿಕ್ಷಕರು ಹಾಗೂ ಮುಖ್ಯ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆಗೆ ಕರ್ನಾಟಕ ಆಡಳಿತ ನ್ಯಾಯಮಂಡಳಿಯ (ಕೆಎಟಿ) ಕಲಬುರಗಿ ಪೀಠ ತಡೆ ನೀಡಿದೆ. ಕರ್ನಾಟಕ ರಾಜ್ಯ ನಾಗರಿಕ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಕಾಯ್ದೆ 2020 ಅನ್ವಯ 202425ನೇ ಸಾಲಿನ ಶಿಕ್ಷಕರ ಕೋರಿಕೆ ಹಾಗೂ ಕಡ್ಡಾಯ ವರ್ಗಾವಣೆಗೆ ಲೋಕಸಭಾ ಚುನಾವಣೆ ನೀತಿ ಸಂಹಿತೆ ಘೋಷಣೆಗೂ ಮೊದಲೇ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸುತ್ತೋಲೆ ಹೊರಡಿಸಿತ್ತು. ವರ್ಗಾವಣೆಗೆ ಅರ್ಹರಾದ ಶಿಕ್ಷಕರ ಅಂತಿಮ ಪಟ್ಟಿಯನ್ನು ಈಗಾಗಲೇ ಪ್ರಕಟಿಸಿದ್ದು, ಅರ್ಜಿ ಸಲ್ಲಿಕೆಗೆ ಮೇ 15ರವರೆಗೂ ಅವಕಾಶ ನೀಡಲಾಗಿತ್ತು. ಶಿಕ್ಷಕರ ವರ್ಗಾವಣೆಯನ್ನು ನಾಲ್ಕು ವಲಯಗಳು ಎಂದು ವಿಂಗಡಿಸಿ ವರ್ಗಾವಣೆ ಮಾಡಲಾಗುತ್ತಿದೆ. ಒಂದೇ ಸ್ಥಳದಲ್ಲಿ, ಒಂದೇ ಹುದ್ದೆಯಲ್ಲಿ (ವೃಂದ) ಕೆಲಸ ಮಾಡಿದ ಶಿಕ್ಷಕರ ಸೇವಾ ವಿವರಗಳನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳು ಪಡೆದು, ಸೇವಾ ಪುಸ್ತಕದ ವಿವರಗಳೊಂದಿಗೆ ಸಲ್ಲಿಸಲು ಸೂಚಿಸಲಾಗಿತ್ತು.

ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ರಾಜರಾಜೇಶ್ವರಿನಗರದ ಬಿಇಟಿ ಕಾನ್ವೆಂಟ್‌ನ ಮತಗಟ್ಟೆಗಳಲ್ಲಿ ಶುಕ್ರವಾರ ಬೆಳಗ್ಗೆ ಕಂಡುಬಂದ ಮತದಾರರ ಸರತಿ ಸಾಲುಗಳು.

ಚಿತ್ರಗಳು: ಸುಧಾಕರ್ ದೇವರಾಜ್

ಚಾಮರಾಜಪೇಟೆಯಲ್ಲಿ ಮಹಿಳೆಯರಿಂದಲೇ ನಡೆಯುವ ಪಿಂಕ್ ಬೂತ್ ಒಂದರ ಮುಂದೆ ಮತದಾನಕ್ಕೆ ಕಾಯುತ್ತಿರುವ ನಾಗರಿಕರು.

ರೋಗಿಗಳು ಮತದಾನದಲ್ಲಿ ಭಾಗವಹಿಸಲು ಮಣಿಪಾಲ್ ಆಸ್ಪತ್ರೆ ನೆರವು

ರೋಗಿಗಳಿಂದ ಮತದಾನ

ಬೆಂಗಳೂರು: 2024ರ ಲೋಕಸಭೆ ಚುನಾವಣೆ ಸಂದರ್ಭದಲ್ಲಿ 50 ಒಳರೋಗಿಗಳಿಗೆ ಮತದಾನ ಮಾಡಲು ಸಹಾಯ ಮಾಡಲು ಮಣಿಪಾಲ್ ಆಸ್ಪತ್ರೆ ಸಹಕಾರ ನೀಡಿತು. ರೋಗಿಗಳು ಸುಲಭ, ತೊಂದರೆರಹಿತವಾಗಿ ಮತದಾನ ಮಾಡುವುದರ ಖಾತ್ರಿ ಮಾಡಿಕೊಳ್ಳಲು ವಿವಿಧ ಕ್ಷೇತ್ರಗಳಲ್ಲಿ ಹಸಿರು ಕಾರಿಡಾರ್‌ಗಳನ್ನು ಸೃಷ್ಟಿಸಲಾಗಿತ್ತು.

ರೋಗಿಗಲು ಮತದಾನದ ಹಕ್ಕು ಚಲಾಯಿಸಲು ಆಸ್ಪತ್ರೆಯಿಂದ ನಿಗದಿಪಡಿಸಿದ ವಾಹನಗಳಲ್ಲಿ ರೋಗಿಗಳನ್ನು ಮತಗಟ್ಟೆಗಳಿಗೆ ಕರೆದೊಯ್ಯಲಾಯಿತು. ಈ ರೋಗಿಗಳಿಗೆ ಚುನಾವಣಾ ಪ್ರಕ್ರಿಯೆಯಲ್ಲಿ ಭಾಗವಹಿಸಲು ಸಹಾಯ ಮಾಡಿದ ಭಾರತೀಯ ಚುನಾವಣಾ ಆಯೋಗ ಮತ್ತು ಬಿಬಿಎಂಪಿಗೆ ನನ್ನ ಕೃತಜ್ಞತೆ ಸಲ್ಲಿಸುತ್ತೇನೆ ಎಂದು ಆಸ್ಪತ್ರೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕಾರ್ತಿಕ್ ರಾಜಗೋಪಾಲ್ ತಿಳಿಸಿದರು.

25ರಿಂದ 103 ವರ್ಷಗಳವರೆಗಿನ ಎಲ್ಲ ವಯೋಮಿತಿಗಳ ರೋಗಿಗಳಲ್ಲಿ, ತೀವ್ರ ನಿಗಾ ಘಟಕದ ರೋಗಿಗಳು, ಕರುಳು ಕ್ಯಾನ್ಸರ್‌ನಿಂದ ಬದುಕುಳಿದವರು, ಒಟ್ಟಾರೆ ಬದಲಿ ಮಂಡಿ ಕೀಲು ಜೋಡಣೆ ಶಸ್ತ್ರಚಿಕಿತ್ಸೆಗೆ ಒಳಗಾದವರು, ಡಯಾಲಿಸಿಸ್‌ಲ್ಲಿರುವ ರೋಗಿಗಳು, ಒಬ್ಬ ಅಪಘಾತಕ್ಕೊಳಗಾದವರು ಅಲ್ಲದೆ, ಯುಟಿಐ ಮತ್ತು ಅನಿಮಿಯಾ, ಮಧ್ಯಮ ಪ್ರಮಾಣದ ಕರುಳಿನಲ್ಲಿನ ಅಡೆತಡೆಗಳಿಂದ ಬಳಲುತ್ತಿರುವವರು, ತೀವ್ರ ಮೂತ್ರಪಿಂಡ ಗಾಯಕ್ಕೆ ಗುರಿಯಾದವರು, ಉನ್ನತ ರಕ್ತದೊತ್ತಡ ಇರುವವರು, ಹೃದಯದ ತೊಂದರೆ ಇದ್ದವರು ಸೇರಿದಂತೆ ವಿವಿಧ ರೋಗಿಗಳು ಸೇರಿದ್ದರು.

ಮತದಾನ ಮಾಡಿದ 41 ರೋಗಿಗಗಳು

ದಾದಿಯರು ಮತ್ತು ವೈದ್ಯರು ಸೇರಿದಂತೆ ವೈದ್ಯಕೀಯ ಸಿಬ್ಬಂದಿ ಜತೆಗೆ ಎಲ್ಲಾ 41 ರೋಗಿಗಳನ್ನು ಕೇಂಬ್ರಿಡ್ಜ್ ಲೇಔಟ್, ಎಇಸಿಎಸ್ ಲೇಔಟ್, ಆರ್‌ಟಿ ನಗರ, ಎಚ್‌ಎಸ್‌ಆರ್ 6 ನೇ ವಲಯ, ಹಳೆ ಬೈಯ್ಯಪ್ಪನಹಳ್ಳಿ, ಅಗರ, ಸಿದ್ದಗಂಗಾ ಪಬ್ಲಿಕ್ ಸ್ಕೂಲ್, ಬಿಪಿ ಇಂಡಿಯನ್ ಹೈಸ್ಕೂಲ್, ಹಂಪಿನಗರ, ಮಹಾಲಕ್ಷ್ಮೀಪುರಂ, ಸಂಜಯ್ ನಗರ, ದಾಸರಹಳ್ಳಿ, ಬಿನಿಮಿಲ್ ರಸ್ತೆ, ವ್ಯಾಸಲನಗರ, ಬಾಣಸವಾಡಿ, ಹೂಡಿ, ಅಂಬೇಡ್ಕರ್ ನಗರ, ಮಹದೇವಪುರ, ಜೆಪಿ ನಗರ, ಜಯನಗರ, ಚನ್ನಸಂದ್ರ, ಮತ್ತು ಹೊಸಕೋಟೆ ಮುಂತಾದ ಕ್ಷೇತ್ರಗಳಿಗೆ ಕರೆದುಕೊಂಡು ಹೋಗಲಾಯಿತು.

ಅದಮ್ಯ ಚೇತನ ಮುಖ್ಯಸ್ಥೆ ಡಾ. ತೇಜಸ್ವಿ ಅನಂತ ಕುಮಾರ್ ಅವರು ವಾಸವಿ ವಿದ್ಯಾನಿಕೇತನ ಕಾಲೇಜಿನಲ್ಲಿ, ತಮ್ಮ ಕುಟುಂಬ ಸದಸ್ಯರೊಂದಿಗೆ ಮತದಾನ ಮಾಡಿದರು.